# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.02 | Issue. 238 | Pages. 2 | Date: 02-09-2026, WEDNESDAY RNI NO: KARKAN/2024/89601 Kannada Daily

ಸಂಪುಟ : 02 - ಸಂಚಿಕೆ : 238 - ಪುಟಗಳು : 2 02-09-2026 ಬುಧವಾರ Ph: 8762954248 ದರ : ₹1


# ಎತ್ತಿನಹೊಳೆ: ದಯಾತ್ಮಕ ಪರಿಹಾರದಲ್ಲಿ ಲೋಪ

## ಕೆ.ಎಸ್.ಲಿಂಗೇಶ್ ಆಕ್ರೋಶ | ಎಕರೆಗೆ 2.5 ಲಕ್ಷ ರೂ. ಒಪ್ಪಲು ಸಾಧ್ಯವಿಲ್ಲ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಬಯಲು ಸೀಮೆ ಜಿಲ್ಲೆಗಳಿಗೆ ಕುಡಿಯುವ ನೀರು ಕಲ್ಪಿಸುವ ಉದ್ದೇಶದಿಂದ ಭೂಮಿ ನೀಡಿದ ರೈತರಿಗೆ ದಯಾತ್ಮಕ ಪರಿಹಾರ ನೀಡಲು ಸರ್ಕಾರ ಹಣ ನೀಡಿದ್ದರೂ ಸಮರ್ಪಕವಾಗಿ ವಿತರಿಸದೆ ಸತಾಯಿಸುತ್ತಿದೆ ಎಂದು ಮಾಜಿ ಶಾಸಕ ಕೆ.ಎಸ್. ಲಿಂಗೇಶ್ ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಅವರು, ಎತ್ತಿನಹೊಳೆ ಯೋಜನೆಗೆ ಸಂಬಂಧಿಸಿ ತಕರಾರು ಆಗಿ ಉಳಿದ ಗಂಗೂರು ಸೇರಿ ಸುತ್ತಮುತ್ತಲ ರೈತರಿಗೆ ಸಿದ್ದರಾಮಯ್ಯ ಸರ್ಕಾರ ಪರಿಹಾರವಾಗಿ ಮೀಸಲಿಟ್ಟಿದ್ದ 28.5 ಕೋಟಿ ರೂ.ಗಳನ್ನು ಭೂಮಿ ಕಳೆದುಕೊಂಡವರಿಗೆ ನೀಡದೆ ಜಿಲ್ಲಾಧಿಕಾರಿ ಆದೇಶದ ಮೇರೆಗೆ ಪೊಲೀಸ್ ಸರ್ಪಗಾವಲಿನಲ್ಲಿ ಇಲಾಖೆಯವರು ಭೂಮಿ ಆಗೆಯಲು ಬಂದಿದ್ದರು. ಈ ಹಿನ್ನೆಲೆಯಲ್ಲಿ ಗಂಗೂರು ಭಾಗದ ರೈತರು ನನ್ನ ಬಳಿ ಅಳಲು ತೋಡಿಕೊಂಡರು. ಹಾಗಾಗಿ ನಾನು ಜಿಲ್ಲಾಧಿಕಾರಿಗೆ ಫೋನ್ ಮೂಲಕ ಸಂಪರ್ಕಕ್ಕೆ ಪ್ರಯತ್ನಪಟ್ಟೆ. ಜಿಲ್ಲಾಧಿಕಾರಿ ಕರೆ ಸ್ವೀಕರಿಸಲಿಲ್ಲ. ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡರ ಸಂಪರ್ಕ ಮಾಡಿ ಮಾಹಿತಿ ನೀಡಿದ ಬಳಿಕ ಅವರು ಸೂಚನೆ ನೀಡಿದ ಬಳಿಕ ಜಿಲ್ಲಾಧಿಕಾರಿ ನೌಕರರನ್ನು ವಾಪಸ್ ಕರೆಸಿಕೊಂಡಿದ್ದಾರೆ ಎಂದರು.

1898ರಲ್ಲಿ ಮೈಸೂರು ರಾಜ ಮನೆತನದ ಸರ್ಕಾರದಿಂದ ತಾಲೂಕಿನ ಐದಳ್ಳ ಕಾವಲಿಗೆ ಸೇರಿದಂತೆ ಅಮೃತ್ ಮಹಲ್‌ಗೆ 5,946 ಎಕರೆ




ಭೂಮಿಯನ್ನು ಅರಣ್ಯ ಇಲಾಖೆಗೆ ನೀಡಿದ್ದಾರೆ. ಅದನ್ನ ಅರಣ್ಯ ಇಲಾಖೆಯವರು ಕೂಡಲೇ ದಾಖಲೆ ಸೃಷ್ಟಿಸಿಕೊಳ್ಳದೆ ಇತ್ತ ಕಂದಾಯ ಇಲಾಖೆಯವರು ದಾಖಲೆ ಸೃಷ್ಟಿಸಿಕೊಳ್ಳದೆ ಕಾರಣ ಪುನಃ ಸರ್ಕಾರ ವಾಪಸ್ ಪಡೆದಿದ್ದಾರೆ. ಈ ಸಂದರ್ಭ ಅಲ್ಲಿ ವಾಸ್ತವವಾಗಿ ಸಣ್ಣಪುಟ್ಟ ರೈತರು ಭೂಮಿ ಉಳುಮೆ ಮಾಡಿಕೊಂಡು ಬರುತ್ತಿದ್ದರು. ಅಂದಿನ ಸರ್ಕಾರ ಹರಾಜು ಮೂಲಕ 1033 ಎಕರೆ ಜಮೀನನ್ನು ಗಂಗೂರು, ಐದಳ್ಳ ಕಾವಲು ಭಾಗದ ರೈತರಿಗೆ ಕಾನೂನು ಬದ್ಧವಾಗಿ ನೀಡಲಾಗಿದೆ. ಅಲ್ಲದೆ 2000ರಿಂದ ಈಚೆಗೆ 500 ಎಕರೆ ಉಳುಮೆ ಮಾಡುತ್ತಿದ್ದ ರೈತರಿಗೆ ದರ್ಕಾಸ್ ಮಂಜೂರಾತಿ ಮೂಲಕ ವರ್ಗಾವಣೆ ಆಗಿದೆ. ಹೀಗಿದ್ದರೂ ಅರಣ್ಯ ಇಲಾಖೆ 1898ರ ಆದೇಶ ಇಟ್ಟುಕೊಂಡು ಭೂಮಿ ನಮಗೆ ಸೇರಿದೆ ಎಂದು ರೈತರ ಒಕ್ಕಲಿಬ್ಬಿಸುವ ಕೆಲಸಕ್ಕೆ ಮುಂದಾಗಿದ್ದಾರೆ. ಆದರೆ ಸುಪ್ರೀಂ ಕೋರ್ಟ್ ಆದೇಶದಂತೆ ಒಂದು ವೇಳೆ ರೈತರು ಅರಣ್ಯ ಇಲಾಖೆಗೆ ಸಂಬಂಧಿಸಿದ ಜಾಗದಲ್ಲಿ10 ಎಕರೆ ಒಳಗೆ ಇರುವ ಸಣ್ಣಪುಟ್ಟ ರೈತರು ಜಮೀನು ಉಳುಮೆ ಮಾಡುತ್ತಿದ್ದರೆ ಅಂತಹ ರೈತರ ಒಕ್ಕಲಿಬ್ಬಿಸದಂತೆ ಆದೇಶ ನೀಡಿದೆ. ಅಲ್ಲದೆ ಈ ಇಬ್ಬರ ನಡುವೆ ಕಾಲ ಕಾಲಕ್ಕೆ ದಾಖಲಾತಿಗಳು ವರ್ಗಾವಣೆ ಯಾಗಿದ್ದರೆ ಕಿತ್ತಾಟದ ಸಂಭವ ಉದ್ಭವವಾಗುತ್ತಿರಲಿಲ್ಲ. ಬಳಿಕ ಎತ್ತಿನಹೊಳೆ ಯೋಜನೆಗೆ ರೈತರು ಮತ್ತು ಅರಣ್ಯ ಇಲಾಖೆಯ ಕಿತ್ತಾಟದಿಂದ ತಕರಾರು ಆಗಿ ನಿಂತಿದ್ದ ಪರಿಣಾಮದಿಂದ ಅಂದಿನ ಉಸ್ತುವಾರಿ ಸಚಿವ ಕೆ.ಎನ್. ರಾಜಣ್ಣ ಅವರು ಸರ್ಕಾರದ ಗಮನ ಸೆಳೆದ ಹಿನ್ನೆಲೆಯಲ್ಲಿ ಅಂದಿನ ಸರ್ಕಾರ ಕ್ಯಾಬಿನೆಟ್ ಮೂಲಕ 28.5 ಕೋಟಿ ರೂ. ಪರಿಹಾರದ ಹಣ ಮೀಸಲಿಡಲಾಯಿತು ಎಂದರು.

ಹೆಚ್‌ಡಿಸಿಸಿ ಬ್ಯಾಂಕ್ ನಿರ್ದೇಶಕ ಎಂ.ಎ.ನಾಗರಾಜ್ ಮಾತನಾಡಿ, ಪ್ರತಿವರ್ಷದಂತೆ ತಾಲೂಕಿನಲ್ಲಿ ಈ ವರ್ಷ ಮಳೆಯಾಗದೆ ತೀವ್ರ ಬರ ಆವರಿಸಿದೆ. ಮಲೆನಾಡು ಭಾಗದಲ್ಲಿ ಪ್ರಾಣಿ ಮತ್ತು ಮನುಷ್ಯನ ನಡುವೆ ಸಂಘರ್ಷ ಹೆಚ್ಚಾಗಿದೆ.

> ಎಕರೆಗೆ 30 ಲಕ್ಷ ರೂ. ಪರಿಹಾರ ನೀಡದೆ ಕೇವಲ ದಯಾತ್ಮಕ ಪರಿಹಾರವಾಗಿ 2.5 ಲಕ್ಷ ರೂ. ನೀಡಲು ಮುಂದಾಗಿರುವುದು ಘೋರ ಅನ್ಯಾಯ. ಸರ್ಕಾರ ಮೀಸಲಿಟ್ಟಿರುವ 28.5 ಕೋಟಿ ರೂ. ಪರಿಹಾರದ ಹಣವನ್ನು ಕಾನೂನಾತ್ಮಕವಾಗಿ ರೈತರಿಗೆ ನಿಡಿ ಎತ್ತಿನಹೊಳೆ ಯೋಜನೆಗೆ ಭೂಮಿ ಪಡೆದುಕೊಂಡು ಕಾಮಗಾರಿ ಆರಂಭಿಸಬೇಕು. ಇಲ್ಲದಿದ್ದರೆ ಬೇಡಿಕೆ ಈಡೇರುವ ತನಕ ಹೋರಾಟ ನಡೆಸಲಾಗುವುದು.
>
> **- ಕೆ.ಎಸ್.ಲಿಂಗೇಶ್, ಮಾಜಿ ಶಾಸಕ**

ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಸರಿಯಾಗಿ ಸರ್ವೆ ಕಾರ್ಯ ನಡೆಸಿ ನ್ಯಾಯ ಒದಗಿಸಿಕೊಡಬೇಕು ಎಂದು ಆಗ್ರಹಿಸಿದರು.

ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಚಂದ್ರೇಗೌಡ ಮಾತನಾಡಿ, ಕೋಗಿಲೆ ಮನೆ ಕ್ಷೇತ್ರದ ಭಾಗದಲ್ಲಿ ಕಾಡಾನೆಗಳ ಹಾವಳಿ ಹೆಚ್ಚಾಗಿದ್ದು ರಾತ್ರಿ ಹಗಲು ರೈತರು ಬೆಂಕಿ ಹಾಕಿ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಆನೆ ಹಾವಳಿಯಿಂದ ರೈತರಿಗೆ ಸಾಕಷ್ಟು ನಷ್ಟ ಉಂಟಾಗಿದ್ದು ಸರ್ಕಾರ ರೈತರಿಗೆ ಕೂಡಲೇ ಬೆಳೆ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಗಂಗೂರು ಸಿದ್ದೇಶ್, ಹಗರೆ ಈಶ್ವರ್, ಜೆಡಿಎಸ್ ಮುಖಂಡ ಲೋಕೇಶ್ ಗೌಡ ಹಾಜರಿದ್ದರು.

# ವಡ್ಡರಹಳ್ಳಿಯಲ್ಲಿ ಬೋನಿಗೆ ಬಿದ್ದ ಚಿರತೆ: ನಿಟ್ಟುಸಿರು ಬಿಟ್ಟ ಜನರು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ತಾಲೂಕಿನ ರಾಮನಾಥಪುರ ಹೋಬಳಿಯ ವಡ್ಡರಹಳ್ಳಿ ಸೇರಿ ಸುತ್ತಲಿನ ಗ್ರಾಮಗಳಲ್ಲಿ ಕಳೆದ ಕೆಲ ದಿನಗಳಿಂದ ಸಂಚರಿಸಿ ಗ್ರಾಮಸ್ಥರಲ್ಲಿ ಆತಂಕ ಮೂಡಿಸಿದ್ದ ಚಿರತೆ ಮಂಗಳವಾರ ಅರಣ್ಯ ಇಲಾಖೆ ಇರಿಸಿದ್ದ ಬೋನಿಗೆ ಬಿದ್ದಿದೆ.

ವಡ್ಡರಹಳ್ಳಿ, ರುದ್ರಪಟ್ಟಣ, ಹನ್ಯಾಳು, ಮತ್ತಿಗೋಡು, ಜೆ.ಹೊಸಹಳ್ಳಿ ಸೇರಿ ಸುತ್ತಲಿನ ಗ್ರಾಮಗಳ ವ್ಯಾಪ್ತಿಯಲ್ಲಿ ಚಿರತೆ ಓಡಾಟ ಕಂಡುಬಂದಿತ್ತು. ಕಳೆದ ಕೆಲ ದಿನಗಳ ಹಿಂದೆ ವಡ್ಡರಹಳ್ಳಿ ಸಮೀಪ ಚಿರತೆ ಕಾಣಿಸಿಕೊಂಡಿದ್ದರಿಂದ ಗ್ರಾಮಸ್ಥರು ಆತಂಕಕ್ಕೀಡಾಗಿದ್ದರು.

ಅರಣ್ಯ ಇಲಾಖೆ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ಈ ವೇಳೆ ವಡ್ಡರಹಳ್ಳಿ ಗ್ರಾಮದಲ್ಲಿ ಚಿರತೆ ನಾಯಿಯನ್ನು ಬೇಟೆಯಾಡಿ ತಿಂದಿರುವುದು ಕಂಡುಬಂದಿತ್ತು. ಕೆಎಸ್‌ಆರ್‌ಟಿಸಿ ಬಸ್ ಗೂ ಅಡ್ಡಲಾಗಿ ಬಂದಿತ್ತು. ಇದರಿಂದಾಗಿ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಚಿರತೆ ಸಂಚಾರವಿರುವುದು ದೃಢಪಟ್ಟಿತ್ತು.

ಚಿರತೆಯ ಓಡಾಟದಿಂದ ಗ್ರಾಮಸ್ಥರು ಭಯಭೀತರಾಗಿದ್ದ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ಮುಂಜಾಗ್ರತಾ ಕ್ರಮವಾಗಿ ಬೋನು ಇರಿಸಿ, ಚಿರತೆಯ ಚಲನವಲನದ



ಮೇಲೆ ನಿರಂತರ ನಿಗಾ ವಹಿಸಿದ್ದರು. ಚಿರತೆಯನ್ನು ಸುರಕ್ಷಿತವಾಗಿ ಸೆರೆ ಹಿಡಿಯಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿತ್ತು.

ಅರಣ್ಯ ಇಲಾಖೆ ಸಿಬ್ಬಂದಿ ಇರಿಸಿದ್ದ ಬೋನಿಗೆ ಇದೀಗ ಚಿರತೆ ಬಿದ್ದಿದ್ದು, ಸುತ್ತಮುತ್ತಲಿನ ಗ್ರಾಮಸ್ಥರು ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ. ಚಿರತೆ ಸೆರೆಯಾಗಿರುವ ಸುದ್ದಿ ತಿಳಿಯುತ್ತಿದ್ದಂತೆ ಗ್ರಾಮಸ್ಥರು ಸ್ಥಳಕ್ಕೆ ಆಗಮಿಸಿ ಕುತೂಹಲದಿಂದ ವೀಕ್ಷಿಸಿದರು.

ಸೆರೆಯಾಗಿರುವ ಚಿರತೆಯನ್ನು ಅರಣ್ಯ ಇಲಾಖೆ ಅಧಿಕಾರಿಗಳು ಪರಿಶೀಲಿಸಿ, ಆರೋಗ್ಯ ಸ್ಥಿತಿ ಸೇರಿದಂತೆ ಅಗತ್ಯ ಮಾಹಿತಿಯನ್ನು ದಾಖಲಿಸಿಕೊಂಡು, ನಿಯಮಾನುಸಾರ ಸುರಕ್ಷಿತ ಅರಣ್ಯ ಪ್ರದೇಶಕ್ಕೆ ಸ್ಥಳಾಂತರಿಸಿದರು.

ಚಿರತೆ ಸೆರೆ ಸಿಕ್ಕಿದ್ದರೂ ಗ್ರಾಮಸ್ಥರು ಮುಂಜಾಗ್ರತೆ ವಹಿಸಬೇಕು. ವಿಶೇಷವಾಗಿ ಮುಂಜಾನೆ ಹಾಗೂ ರಾತ್ರಿ ವೇಳೆ ಒಂಟಿಯಾಗಿ ಸಂಚರಿಸದತೆ, ಜಾನುವಾರುಗಳನ್ನು ಸುರಕ್ಷಿತ ಸ್ಥಳದಲ್ಲಿ ಕಟ್ಟಿಹಾಕುವಂತೆ ಹಾಗೂ ಚಿರತೆ ಅಥವಾ ಇತರೆ ಕಾಡುಪ್ರಾಣಿಗಳ ಚಲನವಲನ ಕಂಡುಬದರೆ ತಕ್ಷಣ ಅರಣ್ಯ ಇಲಾಖೆ ಸಿಬ್ಬಂದಿ ಗ್ರಾಮಸ್ಥರಿಗೆ ಮನವಿ ಮಾಡಿದರು.

# ಪ್ರಸಾದ್ ಯೋಜನೆಗೆ ಶ್ರವಣಬೆಳಗೊಳ ಕ್ಷೇತ್ರ ಸೇರಲಿ: ಮನವಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಪ್ರಸಾದ್ ಯೋಜನೆಯಡಿ ವಿಶ್ವವಿಖ್ಯಾತ ಶ್ರವಣಬೆಳಗೊಳ ಕ್ಷೇತ್ರಕ್ಕೆ ಸಮಗ್ರ ಅಭಿವೃದ್ಧಿ ಹಾಗೂ ಮೂಲಸೌಕರ್ಯ ಕಲ್ಪಿಸುವಂತೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರಿಗೆ ಶಾಸಕ ಸಿ.ಎನ್.ಬಾಲಕೃಷ್ಣ ನೇತೃತ್ವದಲ್ಲಿ ಶ್ರವಣಬೆಳಗೊಳ ಜೈನ ಮಠದ ವತಿಯಿಂದ ಮನವಿ ಸಲ್ಲಿಸಲಾಯಿತು.

ಹಿರಿಸಾವೆ, ಶ್ರವಣಬೆಳಗೊಳ ಹಾಗೂ ಚನ್ನರಾಯಪಟ್ಟಣಕ್ಕೆ ಸಂಪರ್ಕ ಕಲ್ಪಿಸುವ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿಪಡಿಸುವುದು, ಕ್ಷೇತ್ರದ ಪ್ರವಾಸೋದ್ಯಮ ಅಭಿವೃದ್ಧಿಗೆ ಪ್ರಸಾದ್ ಯೋಜನೆಯಿಂದ ಅಗತ್ಯ ಮೂಲಸೌಕರ್ಯ ಕಲ್ಪಿಸುವುದು, ಶ್ರವಣಬೆಳಗೊಳದಲ್ಲಿ ನಿರ್ಮಾಣಗೊಳ್ಳುತ್ತಿರುವ ಪ್ರಾಕೃತ ವಿಶ್ವವಿದ್ಯಾನಿಲಯದ ಶೈಕ್ಷಣಿಕ ಹಾಗೂ ಸಂಶೋಧನಾ ಚಟುವಟಿಕೆಗಳ ಅಭಿವೃದ್ಧಿಗೆ ವಿಶೇಷ ಅನುದಾನ ನೀಡುವಂತೆ ಮನವಿ ಮಾಡಲಾಯಿತು.

ಮುಂಬರುವ ಮಹಾಮಸ್ತಕಾಭಿಷೇಕ ಮಹೋತ್ಸವದ ಹಿನ್ನೆಲೆಯಲ್ಲಿ ಶ್ರವಣಬೆಳಗೊಳಕ್ಕೆ ದೇಶದ ವಿವಿಧ ಭಾಗಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಯಾತ್ರಾರ್ಥಿಗಳು ಆಗಮಿಸುತ್ತಾರೆ. ಈ ಹಿನ್ನೆಲೆಯಲ್ಲಿ ಬೆಂಗಳೂರು, ಹಾಸನ, ಮೈಸೂರು, ಮುಂಬೈ ಸೇರಿದಂತೆ ಪ್ರಮುಖ ನಗರಗಳಿಂದ ಶ್ರವಣಬೆಳಗೊಳಕ್ಕೆ ವಿಶೇಷ ರೈಲುಗಳ ಸಂಚಾರ ಕಲ್ಪಿಸಬೇಕು. ವಿಶೇಷವಾಗಿ ಶ್ರವಣಬೆಳಗೊಳ ಭಾಗದ ಸಾವಿರಾರು ಜನರು ಮುಂಬೈಯಲ್ಲಿ ವ್ಯಾಪಾರ ವಹಿವಾಟು ಹಾಗೂ ಉದ್ಯೋಗಕ್ಕಾಗಿ ನೆಲೆಸಿರುವುದರಿಂದ ಶಾಸಕರು ಇದನ್ನು ಮನಗಂಡು ವಿಶೇಷ ಮುತುವರ್ಜಿ ವಹಿಸಿ ಮನವಿ ಸಲ್ಲಿಸಿದರು.

ಬೇಡಿಕೆಗಳಿಗೆ ಸಂಬಂಧಿಸಿದಂತೆ ಕೇಂದ್ರ ಸಾರಿಗೆ ಸಚಿವ ನಿತಿನ್ ಗಡ್ಕರಿ, ಕೇಂದ್ರ ಶಿಕ್ಷಣ ಸಚಿವ ಪ್ರಹ್ಲಾದ್ ಜೋಶಿ, ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಹಾಗೂ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ ಎಚ್.ಡಿ.ಕುಮಾರಸ್ವಾಮಿ ಅವರ ಮೂಲಕ ಮನವಿ ಪತ್ರ ನೀಡಲಾಯಿತು.

ಜೈನ ಮಠದ ಪ್ರತಿನಿಧಿ ರಾಜೇಶ್ ಖನ್ನಾ ಇದ್ದರು.

# ಬಿಜೆಪಿ ವಿರುದ್ಧ ಜಿಲ್ಲಾ ಕಾಂಗ್ರೆಸ್ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕೇಂದ್ರ ಸರ್ಕಾರವು ಸಂವಿಧಾನ ವಿರೋಧಿ ನಿಲುವುಗಳ ಮೂಲಕ ದೇಶಾದ್ಯಂತ ಅಭದ್ರತೆ ಸೃಷ್ಟಿಸುತ್ತಿದೆ ಎಂದು ಆರೋಪಿಸಿ ಕಾಂಗ್ರೆಸ್ ಕಾರ್ಯಕರ್ತರು ಮಂಗಳವಾರ ನಗರದಲ್ಲಿ ಪ್ರತಿಭಟನೆ ನಡೆಸಿದರು.

ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ವಿರುದ್ಧ ಬಿಜೆಪಿ ಉದ್ದೇಶಪೂರ್ವಕವಾಗಿ ಎಫ್‌ಐಆರ್ ದಾಖಲಿಸಲಾಗಿದೆ. ಉತ್ತರಾಖಂಡದ ರಾಮಲೀಲಾ ಮೈದಾನದಲ್ಲಿ ಇತ್ತೀಚೆಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಭಾಷಣ ಮಾಡಿದ ಬಳಿಕ ಆ ಸ್ಥಳವನ್ನು ಹವನದ ಮೂಲಕ ಶುದ್ಧೀಕರಣ ಮಾಡಲಾಗಿತ್ತು. ಆ




ಮೂಲಕ ಬಿಜೆಪಿ ಇನ್ನೂ ಜಾತಿ ಪದ್ಧತಿ, ಅಸ್ಪೃಶ್ಯತೆಯನ್ನು ಜೀವಂತವಾಗಿಟ್ಟಿದೆ. ರಾಷ್ಟ್ರೀಯ ಪಕ್ಷದ ಅಧ್ಯಕ್ಷರೊಬ್ಬರಿಗೆ ಈ ರೀತಿ ಅವಮಾನ ಆಗಿರುವುದನ್ನು ಖಂಡಿಸಿ ಸಂಸದ ರಾಹುಲ್ ಗಾಂಧಿ ಕಾನೂನುಬದ್ಧ ವಿಚಾರಣೆಗೆ ಆಗ್ರಹಿಸಿದ್ದರು. ಸುದ್ದಿಗೋಷ್ಠಿ ಮೂಲಕ ಬಿಜೆಪಿಯ ಪ್ರಜಾಪ್ರಭುತ್ವ ವಿರೋಧಿ ನಡೆ ಪ್ರಶ್ನಿಸಿದ್ದಕ್ಕೆ ಅವರ ವಿರುದ್ಧ ಉತ್ತರಾಖಂಡ ಪೊಲೀಸರು ಎಫ್‌ಐಆರ್ ದಾಖಲಿಸಿದ್ದು, ಖಂಡನೀಯ ಎಂದರು.

ಡಾ.ಬಿ.ಆರ್.ಅಂಬೇಡ್ಕರ್ ಅವರ ಸಂವಿಧಾನ ಸರ್ವರಿಗೂ ಸಮಾನತೆ ಕರುಣಿಸಿದೆ. ಆದರೆ ಬಿಜೆಪಿ ಇಂದಿಗೂ ಅಸ್ಪೃಶ್ಯತೆ ಆಚರಿಸುತ್ತಿದೆ. ದಲಿತರ ಮೇಲೆ ನಡೆಯುತ್ತಿರುವ ದೌರ್ಜನ್ಯ ಖಂಡಿಸುವವರನ್ನು ಅಪರಾಧಿಗಳಂತೆ ಬಿಂಬಿಸಲಾಗುತ್ತಿದೆ. ಇದು ಸಂವಿಧಾನದ ಮೇಲೆ ನಡೆಯುತ್ತಿರುವ ದಾಳಿಯಾಗಿದ್ದು ಕಾಂಗ್ರೆಸ್ ಈ ನೀತಿಯ ವಿರುದ್ಧ ನಿರಂತರ ಹೋರಾಟ ಮಾಡುತ್ತದೆ ಎಂದು ಎಚ್ಚರಿಕೆ ನೀಡಿದರು.

ಮಲ್ಲಿಕಾರ್ಜುನ ಖರ್ಗೆ ಅವರಿಗೆ ಅವಮಾನ ಮಾಡಿರುವವರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು. ರಾಹುಲ್ ಗಾಂಧಿ ವಿರುದ್ಧ ದಾಖಲಾಗಿರುವ ಆಧಾರ ರಹಿತ ಎಫ್‌ಐಆರ್ ಅನ್ನು ರದ್ದುಪಡಿಸಬೇಕು ಎಂದು ಆಗ್ರಹಿಸಿದರು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಇ.ಹೆಚ್. ಲಕ್ಷ್ಮಣ್, ಕಾರ್ಯಾಧ್ಯಕ್ಷ ಶಶಿಧರ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ರಂಜಿತ್ ಗೊರೂರು, ರಘು ದಾಸರಕೊಪ್ಪಲು, ತಾರಾ ಚಂದನ್, ಮಂಜುನಾಥ್ ಶರ್ಮಾ ಮತ್ತಿತರರಿದ್ದರು.

# ಹಳ್ಳಿಮೈಸೂರಿನಲ್ಲಿ ಸಂಸದರಿಂದ ಜನ ಸಂಪರ್ಕ ಸಭೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಸಂಸದ ಶ್ರೇಯಸ್ ಪಟೇಲ್ ಅವರು ಮಂಗಳವಾರ ತಾಲ್ಲೂಕಿನ ಹಳ್ಳಿಮೈಸೂರು ಗ್ರಾಮ ಪಂಚಾಯಿತಿ ಆವರಣದಲ್ಲಿ ಹೋಬಳಿ ಮಟ್ಟದ ಜನ ಸ್ಪಂದನ ಸಭೆ ನಡೆಸಿದರು.

ಹೋಬಳಿಯ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ರೈತರು ಹಾಗೂ ಸಾರ್ವಜನಿಕರು ಕೃಷಿ, ನೀರಾವರಿ, ರಸ್ತೆ, ಕುಡಿಯುವ ನೀರು, ವಿದ್ಯುತ್, ವಸತಿ, ಕಂದಾಯ, ಪಿಂಚಣಿ, ಸರ್ಕಾರಿ ಸೌಲಭ್ಯ ಹಾಗೂ ಗ್ರಾಮೀಣಾಭಿವೃದ್ಧಿ ಸೇರಿದಂತೆ ಹಲವು ಸಮಸ್ಯೆಗಳನ್ನು ಸಂಸದರ ಗಮನಕ್ಕೆ ತಂದರು.

ಪ್ರತಿಯೊಬ್ಬರ ಅಹವಾಲುಗಳನ್ನು ಆಲಿಸಿದ ಸಂಸದರು, ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸ್ಥಳದಲ್ಲಿಯೇ ಚರ್ಚಿಸಿ ಸಮಸ್ಯೆಗಳಿಗೆ ಆದ್ಯತೆಯ ಮೇರೆಗೆ ಸೂಕ್ತ ಪರಿಹಾರ ಕಲ್ಪಿಸುವಂತೆ ಸೂಚಿಸಿದರು.

ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದು, ಸಾರ್ವಜನಿಕರಿಂದ ಸ್ವೀಕರಿಸಲಾದ ಅಹವಾಲುಗಳನ್ನು ಪರಿಶೀಲಿಸಿ ತಮ್ಮ ವ್ಯಾಪ್ತಿಯ ಸಮಸ್ಯೆಗಳನ್ನು ಶೀಘ್ರವಾಗಿ ಪರಿಹರಿಸುವಂತೆ ಸಂಸದರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸರ್ಕಾರದ ವಿವಿಧ ಯೋಜನೆಗಳು ಹಾಗೂ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪಬೇಕು. ಗ್ರಾಮೀಣ ಪ್ರದೇಶಗಳ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸೂಚಿಸಿದರು.

# ಸಿಮೆಂಟ್ ಮಂಜು ಕಾರ್ಯವೈಖರಿ ಮೆಚ್ಚಿ ಬಿಜೆಪಿ ಸೇರಿದ ಯುವಕರು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಶಾಸಕ ಸಿಮೆಂಟ್ ಮಂಜು ಅವರ ಕಾರ್ಯವೈಖರಿ, ಕ್ಷೇತ್ರದ ಅಭಿವೃದ್ಧಿಯ ಬಗೆಗಿನ ಬದ್ಧತೆಯನ್ನು ಮೆಚ್ಚಿ ಯಸಳೂರು ಹೋಬಳಿಯ ನಾರೂರು ಗ್ರಾಮದ ವಿವಿಧ ಪಕ್ಷಗಳ ಕಾರ್ಯಕರ್ತರು ತಮ್ಮ ಪಕ್ಷಗಳನ್ನು ತೊರೆದು ಭಾರತೀಯ ಜನತಾ ಪಕ್ಷಕ್ಕೆ ಸೇರ್ಪಡೆಯಾದರು.

ಶಾಸಕ ಸಿಮೆಂಟ್ ಮಂಜು ಅವರ ಸಮ್ಮುಖದಲ್ಲಿ ಗ್ರಾಮದ ಅಮಿತ್, ಮಧು ಸೇರಿದಂತೆ ವಿವಿಧ ಪಕ್ಷಗಳಲ್ಲಿ ಗುರುತಿಸಿಕೊಂಡಿದ್ದ ಹಲವು ಕಾರ್ಯಕರ್ತರು ಹಾಗೂ ಪಕ್ಷೇತರರು ಬಿಜೆಪಿ ಸೇರ್ಪಡೆಯಾದರು. ನೂತನವಾಗಿ ಪಕ್ಷಕ್ಕೆ ಸೇರ್ಪಡೆಯಾದವರನ್ನು ಶಾಸಕ ಸಿಮೆಂಟ್ ಮಂಜು ಹಾಗೂ ಸ್ಥಳೀಯ ಬಿಜೆಪಿ ಮುಖಂಡರು ಪಕ್ಷದ ಶಾಲು ಹಾಕಿ ಆತ್ಮೀಯವಾಗಿ ಬರಮಾಡಿಕೊಂಡರು.

ಕ್ಷೇತ್ರದಲ್ಲಿ ಶಾಸಕ ಸಿಮೆಂಟ್ ಮಂಜು ಅವರು ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸುತ್ತಿರುವ ರೀತಿ,



ಅಭಿವೃದ್ಧಿ ವಿಚಾರದಲ್ಲಿ ತೋರುತ್ತಿರುವ ಕಾಳಜಿ ಹಾಗೂ ಪಕ್ಷಾತೀತವಾಗಿ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಕಾರ್ಯವೈಖರಿಯಿಂದ ಪ್ರೇರಿತರಾಗಿ ಬಿಜೆಪಿ ಸೇರ್ಪಡೆಯಾಗುತ್ತಿರುವುದಾಗಿ ನೂತನ ಕಾರ್ಯಕರ್ತರು ತಿಳಿಸಿದರು.

ಗ್ರಾಮೀಣ ಪ್ರದೇಶಗಳ ಮೂಲಸೌಕರ್ಯ ಅಭಿವೃದ್ಧಿ, ರಸ್ತೆ, ಕುಡಿಯುವ ನೀರು, ವಿದ್ಯುತ್, ಆರೋಗ್ಯ, ಶಿಕ್ಷಣ ಸೇರಿ ಜನರ ದೈನಂದಿನ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಲು ಶಾಸಕರು ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಜನರೊಂದಿಗೆ ಬೆರೆತು ಅವರ ಸಮಸ್ಯೆಗಳನ್ನು ಆಲಿಸಿ ಪರಿಹಾರಕ್ಕೆ ಮುಂದಾಗುತ್ತಿರುವ ಅವರ ಸರಳತೆ ಹಾಗೂ ಮಾನವೀಯ ಗುಣ ನಮ್ಮನ್ನು ಆಕರ್ಷಿಸಿದೆ. ಹೀಗಾಗಿ ಅವರ ನಾಯಕತ್ವದಲ್ಲಿ ಬಿಜೆಪಿ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಪಕ್ಷಕ್ಕೆ ಸೇರ್ಪಡೆಯಾಗಿದ್ದೇವೆ ಎಂದು ಕಾರ್ಯಕರ್ತರು ಹೇಳಿದರು.

ಶಾಸಕ ಸಿಮೆಂಟ್ ಮಂಜು ಮಾತನಾಡಿ, ಬಿಜೆಪಿ ಸೇರ್ಪಡೆಯಾದ ಎಲ್ಲ ಕಾರ್ಯಕರ್ತರನ್ನು ಸ್ವಾಗತಿಸಿ, ಪಕ್ಷದಲ್ಲಿ ಹಳೆಯವರುಹೊಸಬರು ಎಂಬ ಭೇದವಿಲ್ಲ. ಎಲ್ಲರೂ ಒಗ್ಗಟ್ಟಿನಿಂದ ಸಂಘಟನೆಯನ್ನು ಬಲಪಡಿಸಬೇಕು. ಜನರ ವಿಶ್ವಾಸಕ್ಕೆ ತಕ್ಕಂತೆ ಕೆಲಸ ಮಾಡುವುದೇ ನಮ್ಮ ಆದ್ಯತೆಯಾಗಬೇಕು. ಕ್ಷೇತ್ರದ ಅಭಿವೃದ್ಧಿ ಹಾಗೂ ಜನರ ಸಮಸ್ಯೆಗಳಿಗೆ ಸ್ಪಂದಿಸುವ ವಿಚಾರದಲ್ಲಿ ರಾಜಕೀಯ ಭೇದಭಾವಕ್ಕೆ ಅವಕಾಶವಿಲ್ಲ ಎಂದರು.

# ಆಲೂರಿನ ಕುಗ್ರಾಮಗಳಿಗೆ ಬಸ್ ಸಂಚಾರ ಆರಂಭ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಕೆಎಸ್‌ಆರ್‌ಟಿಸಿ ಬಸ್‌ಗಳನ್ನು ಕಾಣದ ತಾಲ್ಲೂಕಿನ ಹಳ್ಳಿಗಳಿಗೆ ನಿರಂತರ ಹೋರಾಟದ ಫಲವಾಗಿ ಬಸ್ ಸಂಚಾರ ಆರಂಭವಾಗಿದ್ದು ಗ್ರಾಮಸ್ಥರು, ಶಾಲಾ-ಕಾಲೇಜು ಮಕ್ಕಳು ಸಂತಸ ವ್ಯಕ್ತಪಡಿಸಿದ್ದಾರೆ.

ತಾಲ್ಲೂಕಿನ ಕಿತ್ತಗೆರೆ-ಕಿತ್ತಗಳಲೆ-ಕೊಡಗಲವಾಡಿ-ವಡೂರು ಮಾರ್ಗದಲ್ಲಿ ಬಸ್ ಸಂಚಾರ ಆರಂಭವಾಗಿದೆ. ಕೊಡ್ಲಿಪೇಟೆಯಿಂದ ಸಕಲೇಶಪುರಕ್ಕೆ ತೆರಳುವ ಎರಡು ಬಸ್‌ಗಳು ನಿತ್ಯ ಈ ಮಾರ್ಗದಲ್ಲಿ ಸಂಚರಿಸಲಿವೆ. ಕೆ.ಹೊಸಕೋಟೆ ಗ್ರಾಮದಲ್ಲಿ ಬಸ್‌ಗೆ ಶಾಸಕ ಸಿಮೆಂಟ್ ಮಂಜು ಅವರು ಚಾಲನೆ ನೀಡಿದರು. ತಮ್ಮ ಊರಿಗೆ ಬಸ್ ಬಂದ ಖುಷಿಯಲ್ಲಿ ವಿದ್ಯಾರ್ಥಿಗಳು ಹರ್ಷದಿಂದ ಪ್ರಯಾಣ ಮಾಡಿದರು.

ಶಾಸಕ ಸಿಮೆಂಟ್ ಮಂಜು ಮಾತನಾಡಿ, ಗ್ರಾಮೀಣ ಭಾಗದ ವಿದ್ಯಾರ್ಥಿಗಳು, ಶಿಕ್ಷಕರು, ರೈತರು




ಹಾಗು ಸಾರ್ವಜನಿಕರ ಬಹುದಿನಗಳ ಬೇಡಿಕೆಗೆ ಸ್ಪಂದಿಸಿ ಕೆ.ಹೊಸಕೋಟೆ ಭಾಗದ ವಿವಿಧ ಗ್ರಾಮಗಳಿಗೆ ಕೆಎಸ್‌ಆರ್‌ಟಿಸಿ ಬಸ್ ಸಂಚಾರ ಆರಂಭಿಸಲಾಗಿದೆ ಎಂದರು.

ವಡೂರು, ಕಿತ್ತಗೆರೆ, ಕಿತ್ತಗಳಲೆ, ಕೊಗಲವಾಡಿ ಹಾಗೂ ಆಲೆಬೇಲೂರು ಭಾಗಕ್ಕೆ ರಸ್ತೆ ಸಂಪರ್ಕವಿದ್ದರೂ ಬಸ್ ಸೌಲಭ್ಯ ಇಲ್ಲದ ಕಾರಣ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದರು.

ವಿಶೇಷವಾಗಿ ವಿದ್ಯಾರ್ಥಿಗಳು 3 ರಿಂದ 5 ಕಿ.ಮೀ. ನಡೆದುಕೊಂಡು ಶಾಲೆಗೆ ತೆರಳಬೇಕಾಗಿತ್ತು. ಸ್ಥಳೀಯರ ನಿರಂತರ ಬೇಡಿಕೆಯನ್ನು ಪರಿಗಣಿಸಿ ಕೆಎಸ್‌ಆರ್‌ಟಿಸಿ ಅಧಿಕಾರಿಗಳೊಂದಿಗೆ ಚರ್ಚಿಸಿ ಬಸ್ ಸಂಚಾರ ಆರಂಭಿಸಲಾಗಿದೆ. ಅದರಿಂದ ವಿದ್ಯಾರ್ಥಿಗಳು, ರೈತರು, ಕೂಲಿ ಕಾರ್ಮಿಕರು ಹಾಗು ರೋಗಿಗಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದರು.

ಈ ಭಾಗದ ಜನರ ಅನುಕೂಲಕ್ಕಾಗಿ ಕೊಡ್ಲಿಪೇಟೆ ಮಾರ್ಗವಾಗಿ ಬೆಂಗಳೂರಿಗೂ ನೇರ ಬಸ್ ಸೌಲಭ್ಯ ಕಲ್ಪಿಸಲಾಗಿದೆ. ಸಕಲೇಶಪುರ ಭಾಗಕ್ಕೆ ಈ ವರೆಗೆ ಸುಮಾರು 15 ಹೊಸ ಬಸ್‌ಗಳು ಬಂದಿದ್ದು, ಮುಂದಿನ ದಿನಗಳಲ್ಲಿ ಬೇಡಿಕೆ ಇರುವ ಗ್ರಾಮೀಣ ಮಾರ್ಗಗಳಿಗೆ ಆದ್ಯತೆ ಮೇರೆಗೆ ಬಸ್ ಸೇವೆ ವಿಸ್ತರಿಸಲಾಗುವುದೆಂದು ಭರವಸೆ ನೀಡಿದರು.

ಕನ್ನಡ ಪೋಸ್ಟ್

E-mail : kannadapostnews@gmail.com facebook.com / ಕನ್ನಡ post



# ಭಾರತ್ ಜೋಡೋ ಯುವ ಸಂಘಕ್ಕೆ 37 ಸಾವಿರ ಸದಸ್ಯರು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಯುವಜನರ ಸಬಲೀಕರಣ, ನಾಯಕತ್ವ ಗುಣ ಬೆಳೆಸುವ ಉದ್ದೇಶದಿಂದ ರಾಜ್ಯ ಸರ್ಕಾರವು ಭಾರತ್ ಜೋಡೋ ಯುವ ಸಂಘ ಸ್ಥಾಪನೆಗೆ ಮುಂದಾಗಿದ್ದು, ಜಿಲ್ಲೆಯಲ್ಲಿ ಈ ವರೆಗೆ 37,812 ಸದಸ್ಯರು ನೋಂದಣಿಯಾಗಿದ್ದಾರೆ.

ಜಿಲ್ಲಾದ್ಯಂತ ಗ್ರಾಮೀಣ ಭಾಗದಲ್ಲಿ ಪಂಚಾಯಿತಿಗೆ ಒಂದರಂತೆ 261 ಹಾಗೂ ಪಟ್ಟಣ, ನಗರ ಭಾಗದಲ್ಲಿ 80 ಸೇರಿ 341 ಸಂಘ ಸ್ಥಾಪನೆಗೆ ನಿರ್ಧರಿಸಲಾಗಿದೆ. ಪ್ರತಿ ಸಂಘದಲ್ಲಿ 100 ಸದಸ್ಯರು ಇರಬೇಕೆಂದು ಸೂಚಿಸಲಾಗಿದೆ. ಯುವಕರಲ್ಲಿ ನಾಯಕತ್ವ ಗುಣ ಬೆಳೆಸುವುದು, ದೇಶ ಪ್ರೇಮ, ಆರೋಗ್ಯ ನೈರ್ಮಲ್ಯ, ಕ್ರೀಡೆ, ಯೋಗ, ಸಾಂಸ್ಕೃತಿಕ ಕಾರ್ಯಕ್ರಮ, ರಕ್ತದಾನ ಶಿಬಿರ, ಡಿಜಿಟಲ್ ಸಾಕ್ಷರತೆ, ಸಾಮಾಜಿಕ ಸಾಮರಸ್ಯ ಮೂಡಿಸುವ ಸ್ಪಷ್ಟ ಗುರಿಯೊಂದಿಗೆ ಕೈಗೊಂಡಿರುವ ಯೋಜನೆಯು ಫಲಪ್ರದವಾಗಬೇಕೆಂದು ಸರ್ಕಾರ ಕಟ್ಟುನಿಟ್ಟಿನ ಆದೇಶ ಹೊರಡಿಸಿದೆ. ಈ ನಿಟ್ಟಿನಲ್ಲಿ ಜಿಲ್ಲಾಡಳಿತ ಎಲ್ಲಾ ಸಿದ್ಧತೆ ಮಾಡಿಕೊಂಡಿದೆ. ಗ್ರಾಮೀಣ ಭಾಗದಲ್ಲಿ ಆನ್‌ಲೈನ್ ಮೂಲಕ 13,413, ಆಫ್‌ಲೈನ್‌ನಲ್ಲಿ 14,763 ಮತ್ತು ನಗರ ವ್ಯಾಪ್ತಿಯಲ್ಲಿ ಆನ್‌ಲೈನ್‌ನಿಂದ 6,726 ಹಾಗು 2,910 ಜನರು ಆಫ್‌ಲೈನ್ ಮೂಲಕ ನೋಂದಣಿಯಾಗಿದ್ದಾರೆ.

**ಪ್ರತಿ ಸಂಘಕ್ಕೆ 10 ಲ.ರೂ.**

ಭಾರತ್ ಜೋಡೋ ಯುವ ಸಂಘಟನೆಯನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಗಂಭೀರವಾಗಿ ಪರಿಗಣಿಸಿದ್ದಾರೆ. ಯುವ ಶಕ್ತಿಯನ್ನು ಸಮರ್ಥವಾಗಿ ಬಳಸಿಕೊಳ್ಳುವ ನಿಟ್ಟಿನಲ್ಲಿ ಸಂಘಗಳ ಕಾರ್ಯಚಟುವಟಿಕೆಗೆ ಕೋಟ್ಯಾಂತರ ರೂಪಾಯಿ ಹಣವನ್ನು ಮೀಸಲಿಡಲಾಗಿದೆ. ಪ್ರತಿ ಸಂಘಕ್ಕೆ 10 ಲ.ರೂ. ಅನುದಾನ ದೊರೆಯಲಿದೆ. ಜಿಲ್ಲಾ ಸಂಯೋಜಕರಾಗಿ ನಿಡಘಟ್ಟ ರವಿ (ಬಿಇ ವಿದ್ಯಾರ್ಹತೆ) ಅವರನ್ನು ನೇಮಿಸಲಾಗಿದೆ. ಮುಂದಿನ ಎರಡು ವರ್ಷಗಳ ಕಾಲ ಪ್ರತಿ ತಿಂಗಳು 35 ಸಾವಿರ ರೂ. ವೇತನವನ್ನು ಅವರು ಪಡೆಯುತ್ತಾರೆ. ಅದರಂತೆ ಪ್ರತಿ ಸಂಘಕ್ಕೆ 15 ಜನರ ಕಾರ್ಯಕಾರಿ ಸಮಿತಿ ರಚಿಸಲಾಗುತ್ತದೆ. ಅಧ್ಯಕ್ಷ, ಕಾರ್ಯದರ್ಶಿ ಹಾಗೂ ಖಜಾಂಚಿ ಹುದ್ದೆಗಳನ್ನು ಸೃಷ್ಟಿಸಲಾಗುತ್ತದೆ. ಒಟ್ಟು 10 ಲ.ರೂ. ಹಣದಲ್ಲಿ ಮೊದಲ ಕಂತು 2 ಲ.ರೂ. ಬಿಡುಗಡೆ ಆಗಲಿದ್ದು, ಅದನ್ನು ಸದಸ್ಯತ್ವ ನೋಂದಣಿ ಮತ್ತಿತರ ಕೆಲಸಗಳಿಗೆ ಬಳಸಿಕೊಳ್ಳಬಹುದು. ನಂತರ 4 ಲ.ರೂ.ನಂತೆ 2 ಕಂತುಗಳನ್ನು ಸಂಘದ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುವುದು. ಸಂಘಗಳ ಸಭೆ ಮತ್ತು ಚಟುವಟಿಕೆಗಾಗಿ ಸ್ಥಳೀಯ ಶಾಲೆ, ಕಾಲೇಜು ಅಥವಾ ಸರ್ಕಾರಿ ಕಟ್ಟಡಗಳಲ್ಲಿ ಒಂದು ಕೊಠಡಿಯನ್ನು ಭಾರತ್ ಯುವ ಜೋಡೋ ಸಂಘಟನೆಗೆ ನೀಡಲು ನಿರ್ಧರಿಸಲಾಗಿದೆ.

ಗ್ರಾಮ ಮಟ್ಟದಲ್ಲಿ ಶಿಕ್ಷಕರು, ರಾಜಸ್ವ ನಿರೀಕ್ಷಕರು ಹಾಗು ಪಂಚಾಯಿತಿ ಮಟ್ಟದ ಗ್ರಂಥಪಾಲಕರನ್ನು ಮಾರ್ಗದರ್ಶಕರಾಗಿ ನೇಮಿಸಲಾಗಿದೆ.

16 ರಿಂದ 35 ವರ್ಷದೊಳಗಿನವರನ್ನು ಸದಸ್ಯರನ್ನಾಗಿ ಮಾಡಿಕೊಳ್ಳುವುದು ಹಾಗೂ ಧ್ಯೇಯೋದ್ದೇಶಗಳ ಕುರಿತು ಅರಿವು ಮೂಡಿಸುವುದು ಅವರ ಕೆಲಸವಾಗಿದೆ.

ಸದ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಡಾ. ಜಿ.ಡಿ.ಆನಂದಮೂರ್ತಿ ಅವರು ಜಿಲ್ಲಾ ಸಂಯೋಜಕರಾಗಿ ಕೆಲಸ ಮಾಡುತ್ತಿದ್ದಾರೆ. ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಮೇಲ್ವಿಚಾರಣೆ ವಹಿಸಿದ್ದಾರೆ. ಗರಿಷ್ಟ ಪ್ರಮಾಣದಲ್ಲಿ ಸದಸ್ಯತ್ವ ಮಾಡಿಸಬೇಕೆಂಬ ನಿಟ್ಟಿನಲ್ಲಿ ಜಿಲ್ಲಾಡಳಿತ ಶತಪ್ರಯತ್ನ ನಡೆಸುತ್ತಿದೆ.



## ಆಸಕ್ತಿ ವಹಿಸದ ಜಿಲ್ಲಾ ಕಾಂಗ್ರೆಸ್

ಸದ್ವಿಚಾರಗಳೊಂದಿಗೆ ಅಸ್ತಿತ್ವ ಪಡೆದಿರುವ ಭಾರತ್ ಜೋಡೋ ಯುವ ಸಂಘ ಬಲಗೊಳಿಸಲು ಜಿಲ್ಲಾ ಕಾಂಗ್ರೆಸ್ ಆಸಕ್ತಿ ವಹಿಸುತ್ತಿಲ್ಲ. ಇದು ಸರ್ಕಾರಿ ಯೋಜನೆಯಾಗಿದ್ದರೂ ಸಂಘಗಳಿಗೆ ನೇಮಕವಾಗುವ ಅಧ್ಯಕ್ಷ ಮತ್ತಿತರ ಪದಾಧಿಕಾರಿಗಳು ಪಕ್ಷದ ಕಾರ್ಯಕರ್ತರೇ ಆಗಿರುತ್ತಾರೆ. ಅವರ ನೆರವಿನಿಂದ ಮುಂಬರುವ ಚುನಾವಣೆ ಗೆಲ್ಲುವ ಗುರಿಯನ್ನು ರಾಜ್ಯ ನಾಯಕರು ಹಾಕಿಕೊಂಡಿದ್ದಾರೆ. ಈ ನಿಟ್ಟಿನಲ್ಲಿ ಬೇರೆ ಜಿಲ್ಲೆಗಳಲ್ಲಿ ಪರಿಣಾಮಕಾರಿ ಕೆಲಸಗಳಾಗುತ್ತಿವೆ. ಆದರೆ ಹಾಸನದಲ್ಲಿ ಮಾತ್ರ ಪಕ್ಷದ ಜಿಲ್ಲಾಧ್ಯಕ್ಷ, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ, ಮಾಧ್ಯಮ ವಕ್ತಾರ ಸೇರಿ ಯಾರೂ ಕೂಡ ಇದಕ್ಕೂ ತಮಗೂ ಸಂಬಂಧವಿಲ್ಲ ಎನ್ನುವ ಹೇಳಿಕೆ ನೀಡಿದ್ದಾರೆ. ಜಿಲ್ಲಾಡಳಿತ ಮಾಡುವ ಕೆಲಸಕ್ಕೆ ನಾವು ಮಧ್ಯ ಪ್ರವೇಶಿಸುವುದಿಲ್ಲವೆಂದು ಕಾಂಗ್ರೆಸ್ ಜಿಲ್ಲಾಧ್ಯಕ್ಷ ಹೆಚ್.ಈ.ಲಕ್ಷ್ಮಣ್ ಪ್ರತಿಕ್ರಿಯಿಸಿದ್ದಾರೆ.

> ಭಾರತ್ ಜೋಡೋ ಯುವ ಸಂಘಕ್ಕೆ ಜಿಲ್ಲೆಯಲ್ಲಿ ಸದಸ್ಯತ್ವ ಪ್ರಾರಂಭಿಸಲಾಗಿದೆ. ಒಟ್ಟು 341 ಸಂಘಗಳ ಸ್ಥಾಪನೆಗೆ ಗುರಿ ಹಾಕಿಕೊಳ್ಳಲಾಗಿದೆ. ಜಿಲ್ಲಾಧಿಕಾರಿ ಅವರು ನಿರಂತರ ಸಭೆ ನಡೆಸಿ ಮಾರ್ಗದರ್ಶನ ನೀಡಿದ್ದಾರೆ. ತಾಂತ್ರಿಕ ಕಾರಣಗಳಿಂದ ಆನ್‌ಲೈನ್ ಅರ್ಜಿ ಸ್ವೀಕಾರ ಸ್ಥಗಿತಗೊಂಡಿದ್ದು ಶೀಘ್ರದಲ್ಲೇ ಪ್ರಾರಂಭವಾಗಲಿದೆ.
>
> **- ಡಾ.ಡಿ.ಜಿ.ಆನಂದಮೂರ್ತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ**

# ಮಗನಿಂದ ಕೊಲೆ ಬೆದರಿಕೆ ರಕ್ಷಣೆಗೆ ವೃದ್ಧ ದಂಪತಿ ಮನವಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಆಸ್ತಿಗಾಗಿ ಹಿರಿಯ ಪುತ್ರ ನಿರಂತರ ಹಲ್ಲೆ ನಡೆಸಿ ಕೊಲೆ ಬೆದರಿಕೆ ಹಾಕುತ್ತಿದ್ದು ಇಳಿವಯಸ್ಸಿನಲ್ಲಿರುವ ನಮ್ಮನ್ನು ಯಾವುದಾದರೂ ವೃದ್ಧಾಶ್ರಮಕ್ಕೆ ಸೇರಿಸಬೇಕೆಂದು ನಿಟ್ಟೂರು ಗ್ರಾಮದ ರೇವಣ್ಣಸಿದ್ಧಪ್ಪ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ನನಗೆ 86 ವರ್ಷ ವಯಸ್ಸು, ಪತ್ನಿ ಜಯಮ್ಮ 76 ವರ್ಷದವರಾಗಿದ್ದು, ಕಳೆದ 6 ವರ್ಷಗಳಿಂದ ಪಾರ್ಶ್ವವಾಯು ಸಮಸ್ಯೆಯಿಂದ ಬಳಲುತ್ತಿದ್ದಾರೆ. ಆದರೂ ಮಕ್ಕಳು ನಮ್ಮನ್ನು ನೋಡಿಕೊಳ್ಳುತ್ತಿಲ್ಲ. ವೃದ್ಧಾಶ್ರಮಕ್ಕಾದರೂ ಕಳುಹಿಸಿದರೆ ನೆಮ್ಮದಿಯಿಂದ ಇರುತ್ತೇವೆ ಎಂದು ಕಣ್ಣೀರಿಟ್ಟರು.

ನಮಗೆ ಇಬ್ಬರು ಗಂಡು ಮಕ್ಕಳು ಹಾಗು ಒಬ್ಬಳು ಮಗಳಿದ್ದು, ಎಲ್ಲರೂ ಮದುವೆಯಾಗಿ ಚೆನ್ನಾಗಿದ್ದಾರೆ. ವೃದ್ಧಾಪ್ಯದಲ್ಲಿರುವ ನಮ್ಮನ್ನು ನೋಡಿಕೊಳ್ಳುತ್ತಿಲ್ಲ. ಅನಾರೋಗ್ಯ ನಡುವೆ ಜೀವನ ಸಾಗಿಸುವುದೇ ಕಷ್ಟವಾಗಿದೆ. ವಾಸಿಸುತ್ತಿರುವ ಮನೆಯೂ ಶಿಥಿಲವಾಗಿದೆ. ಪತ್ನಿಗೆ ಅಡುಗೆ ಮಾಡಲು ಶಕ್ತಿಯಿಲ್ಲ, ಹೋಟೆಲ್‌ನಿಂದ ತರೋಣ ಎಂದರೆ ಹಣವಿಲ್ಲ, ಊಟಕ್ಕೂ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ, ಎಷ್ಟೋ ದಿನ ರಾತ್ರಿ ಹಸಿವಿನಿಂದಲೇ ಮಲಗಿದ್ದೇವೆಂದರು.

ನಮ್ಮನ್ನು ನೋಡಿಕೊಳ್ಳದ ಮಕ್ಕಳು, ನನ್ನ ಹೆಸರಿನಲ್ಲಿರುವ 2 ಎಕರೆ ಜಮೀನು ಪಾಲು ನೀಡುವಂತೆ ಒತ್ತಡ ಹೇರುತ್ತಿದ್ದಾರೆ. ನಮಗಿಂತ ಅವರಿಗೆ ಆಸ್ತಿಯೇ ಮುಖ್ಯವಾಗಿದೆ. ಹಿರಿಯ ಮಗ ಕುಮಾರ ನಿತ್ಯ ಮದ್ಯದ ನಶೆಯಲ್ಲಿ ಮೇಲೆ ಹಲ್ಲೆ ಮಾಡುತ್ತಾನೆ. ಕಿರಿಯ ಮಗ ಚಂದ್ರಶೇಖರ್ ಕೆಎಸ್‌ಆರ್‌ಟಿಸಿ ನೌಕರನಾಗದ್ದು ಮನಗೆ ಬರುವುದಿಲ್ಲ. ವಯಸ್ಸಾಗಿರುವ ನನಗೆ ಏನು ಮಾಡಬೇಕೆಂದು ತೋಚುತ್ತಿಲ್ಲ. ಜೀವನ ನಿರ್ವಹಣೆಗೆ ಹಣದ ಅಗತ್ಯವಿದ್ದು, 20 ಗುಂಟೆ ಜಮೀನು ಮಾರಲು ಮುಂದಾಗಿದ್ದೇವೆ. ಅದಕ್ಕೂ ಮಗ ತೊಂದರೆ ಕೊಡುತ್ತಿದ್ದಾನೆ. ನಮ್ಮ ಮೇಲೆ ನಡೆದಿರುವ ಹಲ್ಲೆ ಖಂಡಿಸಿ ಗ್ರಾಮಾಂತರ ಠಾಣೆಗೆ ದೂರು ನೀಡಿದರೆ ಪೊಲೀಸರು ಯಾವುದೇ ಕ್ರಮ ಜರುಗಿಸಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

# ಅಟ್ಟಾವರ ಸರ್ಕಾರಿ ಶಾಲೆಗೆ ಸಂಸದರ ಭೇಟಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ತಾಲ್ಲೂಕಿನ ದುದ್ದ ಹೋಬಳಿಯ ಅಟ್ಟಾವರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಸಂಸದ ಶ್ರೇಯಸ್ ಪಟೇಲ್ ಅವರು ಭೇಟಿ ನೀಡಿ ಶಾಲೆಯ ಶೈಕ್ಷಣಿಕ ವಾತಾವರಣ ಹಾಗೂ ಮೂಲಸೌಕರ್ಯ ವ್ಯವಸ್ಥೆ ಪರಿಶೀಲಿಸಿದರು.

ಶಾಲೆಯ ತರಗತಿ ಕೊಠಡಿ, ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯ, ವಿದ್ಯುತ್ ಸೇರಿ ವಿದ್ಯಾರ್ಥಿಗಳಿಗೆ ಅಗತ್ಯವಿರುವ ವಿವಿಧ ಮೂಲಸೌಕರ್ಯಗಳ ಕುರಿತು ಸಂಸದರು ಶಿಕ್ಷಕರು ಹಾಗೂ ಸ್ಥಳೀಯರಿಂದ ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣದ ಜತೆಗೆ ಸುರಕ್ಷಿತ ಹಾಗೂ ಗುಣಮಟ್ಟದ ಕಲಿಕಾ ವಾತಾವರಣ ಕಲ್ಪಿಸುವುದು ಅಗತ್ಯ. ಶಾಲೆಗೆ ಅಗತ್ಯವಿರುವ ಮೂಲಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚಿಸಿ, ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಮಕ್ಕಳ ಭವಿಷ್ಯವೇ ನಮ್ಮ ಭವಿಷ್ಯ. ವಿದ್ಯಾರ್ಥಿಗಳ ಶಿಕ್ಷಣ ಹಾಗೂ ಶಾಲೆಗಳ ಸಮಗ್ರ ಅಭಿವೃದ್ಧಿಗೆ ಸದಾ ನಿಮ್ಮ ಪರವಾಗಿ ಕಾರ್ಯನಿರ್ವಹಿಸುತ್ತೇನೆ ಎಂದು ಭರವಸೆ ನೀಡಿದರು.

# ಏಕವಚನದ ಹೇಳಿಕೆ ಮುಂದುವರಿದರೆ ಉಗ್ರ ಹೋರಾಟ

## ಶಾಸಕ ಹೆಚ್.ಕೆ.ಸುರೇಶ್‌ಗೆ ಕಾಂಗ್ರೆಸ್ ಕಾರ್ಯಕರ್ತರ ಎಚ್ಚರಿಕೆ I ಬಿ.ಶಿವರಾಂಗೆ ಬೆಂಬಲ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಮಾಜಿ ಸಚಿವ ಬಿ.ಶಿವರಾಂ ವಿರುದ್ಧ ಶಾಸಕ ಹೆಚ್.ಕೆ. ಸುರೇಶ್ ಏಕವಚನದಲ್ಲಿ ಹೇಳಿಕೆ ನೀಡುವುದನ್ನು ಮುಂದುವರಿಸಿದರೆ ಹೋರಾಟ ನಡೆಸಲಾಗುವುದು ಎಂದು ಬಾಗೆ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಚಾರ್ಲ್ಸ್ ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗಂಡಸಿ ಶಿವರಾಂ ಅವರು ನೀರಾವರಿ ಹಾಗೂ ರೈತರ ಪರ ಹೋರಾಟ ನಡೆಸುತ್ತಿದ್ದು, 76 ವರ್ಷ ವಯಸ್ಸಿನಲ್ಲಿಯೂ ಬೆಳಗ್ಗಿನಿಂದ ಸಂಜೆ ವರೆಗೆ ಬೇಲೂರು ತಾಲೂಕಿನಲ್ಲಿ ಜನಪರ ಕೆಲಸ ಮಾಡುತ್ತಿದ್ದಾರೆ. ಆದರೆ, ಸಂಬಂಧಪಟ್ಟವರು ಕ್ಷೇತ್ರದಲ್ಲಿ ಕಾಣಿಸಿಕೊಳ್ಳುತ್ತಿಲ್ಲ ಎಂದು ಟೀಕಿಸಿದರು.

ಬೇಲೂರು ಶಾಸಕ ಸುರೇಶ್ ಅವರು ರಿಯಲ್ ಎಸ್ಟೇಟ್ ವ್ಯವಹಾರದಲ್ಲಿ ತೊಡಗಿಸಿಕೊಂಡಿರುವುದರಿಂದ ರಾಜಕಾರಣಕ್ಕೆ ಗಮನ ನೀಡಲು ಸಮಯವಿಲ್ಲ. ಶಿವರಾಂ ಅವರು ಚುನಾವಣೆಯಲ್ಲಿ ಸೋತಿದ್ದರೂ ಕ್ಷೇತ್ರದ ಜನರ ಪರವಾಗಿ ಕೆಲಸ ಮಾಡುತ್ತಿದ್ದಾರೆ. ಅವರ ಬಗ್ಗೆ ಬಾಯಿಗೆ ಬಂದಂತೆ ಹೇಳಿಕೆ ನೀಡುವುದನ್ನು ಮುಂದುವರಿಸಿದರೆ ಮುಂದಿನ ದಿನಗಳಲ್ಲಿ ದೊಡ್ಡ ಮಟ್ಟದ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.




2028ರ ಚುನಾವಣೆಗೆ ಸೋಲಿನ ಭೀತಿ ಎದುರಾಗಿರುವುದರಿಂದ ಸೋಲುತ್ತೇನೆಂಬ ಆತಂಕದ ಮನೋಭಾವದಿಂದ ಮಾತನಾಡುತ್ತಿದ್ದಾರೆ. ಅಲ್ಲದೆ, ಪೆನಾಯಿಲ್, ಸೋಪಾಯಿಲ್ ಎಂದು ಹೇಳಿಕೆ ನೀಡಿದ್ದಾರೆ.

> ಶ್ರೀಕಂಠಯ್ಯ ಅವರನ್ನು ಆಚೆ ಕಳಿಸಿದರು, ಪುಟ್ಟಸ್ವಾಮಿ ಗೌಡರನ್ನು ಆಚೆ ಕಳಿಸಿದರು. ಎ. ಮಂಜು ಅವರನ್ನು ಆಚೆ ಕಳಿಸಿದರೆ ಎಂದು ಹೇಳುತ್ತಾರೆ. ನಾಲ್ಕು ಬಾರಿ ಶಾಸಕರಾಗಿದ್ದವರು ಏನು ಮಾಡಿದ್ದಾರೆ ಎಂದು ಪ್ರಶ್ನಿಸುವ ಮೊದಲು ಅವರ ಅವಧಿಯಲ್ಲಿ ನಡೆದ ಅಭಿವೃದ್ಧಿ ಕಾರ್ಯಗಳನ್ನು ಗಮನಿಸಬೇಕು. ಅವರ ಅವಧಿಯಲ್ಲಿ ಸಾವಿರಾರು ಬಡವರಿಗೆ ಮನೆ ಹಾಗೂ ವಿವಿಧ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಮತ್ತೊಂದೆಡೆ, ಪ್ರಸ್ತುತ ಕ್ಷೇತ್ರದಲ್ಲಿ ಮೂರೂವರೆ ವರ್ಷಗಳಿಂದ ಶಾಸಕರಾಗಿದ್ದರೂ ಹರಳಿಯಿಂದ ಬೇಲೂರುವರೆಗೆ ರಸ್ತೆ ಗುಂಡಿಗಳನ್ನು ಮುಚ್ಚಲು ಸಾಧ್ಯವಾಗಿಲ್ಲ ಎಂದು ಆರೋಪಿಸಿದರು.

2028ಕ್ಕೆ ಬೇಲೂರು ಜನರು ನಿನ್ನನ್ನು ತೊಳೆಯುತ್ತಾರೆ ಎಂದರು.

ವರ್ಗಾವಣೆ ದಂಧೆ ನಡೆಸುತ್ತಿದ್ದೀರಿ ಎಂದು ಶಿವರಾಂ ವಿರುದ್ಧ ಆಧಾರವಿಲ್ಲದ ಹೇಳಿಕೆ ನೀಡಿದ್ದಾರೆ. ವರ್ಗಾವಣೆ ಎಂಬುದು ಎಲ್ಲ ಸರ್ಕಾರಗಳಲ್ಲೂ ನಡೆಯುವ ಪ್ರಕ್ರಿಯೆ. ಅದೇನು ದಂಧೆಯಲ್ಲ. ಜನಪರ ಕೆಲಸ ಮಾಡಲು ಅಧಿಕಾರಿಗಳನ್ನು ನೇಮಿಸಿಕೊಂಡು ಕೆಲಸ ಮಾಡಿಸುತ್ತಿದ್ದಾರೆ. ಅದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದರು.

ನೀರಾವರಿ ವಿಚಾರವಾಗಿ ಬಾಗಣ ಬಿಡಿಸಲು ಸಾವಿರಾರು ಜನರನ್ನು ಕರೆದುಕೊಂಡು ಹೋಗಿ ಬಾಗಿನ ಅರ್ಪಿಸಿದ್ದಾರೆ. ಅವರು ನಾಲ್ಕು ಬಾರಿ ಶಾಸಕರಾಗಿ, ನಾಲ್ಕು ಬಾರಿ ಸೋತಿದ್ದಾರೆ.

ಅಧಿಕಾರ ಕಳೆದುಕೊಂಡು 20 ವರ್ಷಗಳಾದರೂ ಇಂದು ಜನರೊಂದಿಗೆ ಒಡನಾಟ ಹೊಂದಿಕೊಂಡು ಕೆಲಸ ಮಾಡುತ್ತಿದ್ದಾರೆ. ಅಧಿಕಾರಿಗಳು ಕೂಡ ಅವರೊಂದಿಗಿನ ಒಡನಾಟದಿಂದ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು.

ನೀನು ಲಾಟರಿ ಶಾಸಕ ಎಂದು ಗೆದ್ದು, ಸೋಪಾಯಿಲು, ಪೆನಾಯಿಲು ಹಾಕಿ ಕಾಂಗ್ರೆಸ್ ತೊಳೆದಿದ್ದೇನೆ ಎಂದು ಹೇಳಿದ್ದೀಯ.

ಪ್ರೀತಂ ಗೌಡ ಸೋಲಲು ನೀನೇ ಕಾರಣ. ಇಲ್ಲಿಯೂ ಹೆಚ್ಚು-ಕಡಿಮೆಯಾದರೆ ಸಿಮೆಂಟ್ ಮಂಜು ಸೋಲಲು ನೀನೇ ಕಾರಣವಾಗುತಿದ್ದೆ ಎಂದು ಟೀಕಿಸಿದರು.

ಸುದ್ದಿಗೋಷ್ಠಿಯಲ್ಲಿ ಆದಿಲ್ ಅಲಿ ಉಪಸ್ಥಿತರಿದ್ದರು.

# ಗುಂಡು ತಗುಲಿ ಕಾಫಿ ಬೆಳೆಗಾರ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಬೇಲೂರು: ಕಾಡಾನೆಗಳ ಭೀತಿಯಿಂದ ಜೀವ ರಕ್ಷಣೆಗಾಗಿ ಬಂದೂಕು ಜೊತೆಗೆ ಹೋಗಿದ್ದ ತೆರಳಿದ್ದ ಕಾಫಿ ಬೆಳೆಗಾರನೊಬ್ಬನಿಗೆ ಆಕಸ್ಮಿಕವಾಗಿ ಗುಂಡು ಸಿಡಿದು ಮೃತಪಟ್ಟಿರುವ ಘಟನೆ ತಾಲ್ಲೂಕಿನ ಬಂದಹಳ್ಳಿ ಗ್ರಾಮದಲ್ಲಿ ನಡೆದಿದೆ. ಬಂದಹಳ್ಳಿ ಗ್ರಾಮದ ಕೇಶವಶೆಟ್ಟಿ (61) ಮೃತಪಟ್ಟ ಕಾಫಿ ಬೆಳೆಗಾರ. ಗ್ರಾಮದ ಶೈಲೇಶ್ ಎಂಬುವವರ ಇಶ್ಚಿತ್ ಎಸ್ಟೇಟ್‌ನಲ್ಲಿ ಘಟನೆ ಸಂಭವಿಸಿದೆ. ಕೇಶವಶೆಟ್ಟಿ ಅವರು ಕಾಡಾನೆಗಳಿದ್ದ ಕಾರಣದಿಂದ ತಮ್ಮ ರಕ್ಷಣೆಗಾಗಿ ಬಂದೂಕಿನೊಂದಿಗೆ ಕಾಫಿ ತೋಟಕ್ಕೆ ತೆರಳಿದ್ದರು. ತೋಟದಲ್ಲಿ ನಡೆದುಕೊಂಡು ಹೋಗುತ್ತಿದ್ದ ಸಂದರ್ಭದಲ್ಲಿ ಬಂದೂಕಿನಿಂದ ಆಕಸ್ಮಿಕವಾಗಿ ಗುಂಡು ಸಿಡಿದು ಗಂಭೀರವಾಗಿ ಗಾಯಗೊಂಡಿದ್ದಾರೆ. ತಗುಲಿದ ಬಳಿಕ ಕೇಶವಶೆಟ್ಟಿ ಅವರು ಘಟನಾ ಸ್ಥಳದಿಂದ ಸುಮಾರು 300 ಮೀಟರ್ ದೂರದವರೆಗೆ ನಡೆದುಕೊಂಡು ಬಂದಿದ್ದು, ಬಳಿಕ ಮೃತಪಟ್ಟಿದ್ದಾರೆ. ಮೃತ ದೇಹವನ್ನು ಗಮನಿಸಿದ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ವಿಷಯ ತಿಳಿದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭಾನ್ವಿತ ಹಾಗೂ ಸೋಕೋ ತಂಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅರೇಹಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಇತಿಹಾಸದಲ್ಲಿ ಈ ದಿನ

## ಸೆಪ್ಟೆಂಬರ್-02

1666: ಇಂಗ್ಲೆಂಡ್‌ನ ಲಂಡನ್‌ನಲ್ಲಿ ಭಾರೀ ಅಗ್ನಿ ಅವಘಡ ಆರಂಭಗೊಂಡಿತು. ಸುಮಾರು ನಾಲ್ಕು ದಿನಗಳ ಕಾಲ ಮುಂದುವರಿದ ಬೆಂಕಿಯಿಂದ ನಗರದ ಬಹುಭಾಗ ನಾಶವಾಯಿತು.

1945: ಜಪಾನ್ ಶರಣಾಗತಿ ಪತ್ರಕ್ಕೆ ಸಹಿ ಹಾಕಿದ ಹಿನ್ನೆಲೆಯಲ್ಲಿ ಎರಡನೇ ಮಹಾಯುದ್ಧ ಅಧಿಕೃತವಾಗಿ ಅಂತ್ಯಗೊಂಡಿತು.

1946: ಜವಾಹರಲಾಲ್ ನೆಹರು ಅವರ ನೇತೃತ್ವದಲ್ಲಿ ಭಾರತದ ಮಧ್ಯಂತರ ಸರ್ಕಾರ ಅಸ್ತಿತ್ವಕ್ಕೆ ಬಂತು. ಸ್ವಾತಂತ್ರ್ಯಕ್ಕೂ ಮುನ್ನ ಆಡಳಿತದ ಜವಾಬ್ದಾರಿಯನ್ನು ಭಾರತೀಯ ನಾಯಕರಿಗೆ ವರ್ಗಾಯಿಸುವಲ್ಲಿ ಇದು ಪ್ರಮುಖ ಹೆಜ್ಜೆಯಾಗಿತ್ತು.

**ಜನನ**

1903: ಸಿ.ವಿ. ರಾಮನ್, ನೊಬೆಲ್ ಪ್ರಶಸ್ತಿ ವಿಜೇತ ಭೌತಶಾಸ್ತ್ರಜ್ಞ

# ಆಶ್ರಯ ನಿವೇಶನ ಹಕ್ಕು ಪತ್ರಕ್ಕಾಗಿ ಮನವಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಆಶ್ರಯ ಯೋಜನೆಯಡಿ ನಿವೇಶನ ಮಂಜೂರಾಗಿದ್ದರೂ ಹಕ್ಕುಪತ್ರ ನೀಡದೆ ವಿಳಂಬ ಮಾಡಲಾಗುತ್ತಿದೆ ಎಂದು ಆರೋಪಿಸಿ ಅರಕಲಗೂಡಿನ ಮಾಚಗೌಡನಹಳ್ಳಿ ನಿವಾಸಿಗಳು ರೈತ ಸಂಘದ ನೇತೃತ್ವದಲ್ಲಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ರೈತ ಸಂಘದ ಜಿಲ್ಲಾಧ್ಯಕ್ಷ ಬಾಬು ಮಾತನಾಡಿ, ಮಾಚಗೌಡನಹಳ್ಳಿಯ 36 ಕುಟುಂಬಗಳು ಆಶ್ರಯ ಯೋಜನೆಯಡಿ ನಿವೇಶನಕ್ಕಾಗಿ ಅರ್ಹರಾಗಿದ್ದು, ಈ ಕುರಿತು ಹಲವು ತಿಂಗಳಿನಿಂದ ಜಿಲ್ಲಾಡಳಿತ ಹಾಗೂ ತಾಲ್ಲೂಕು ಆಡಳಿತದ ಗಮನಕ್ಕೆ ತಂದರೂ ಕ್ರಮ ಕೈಗೊಂಡಿಲ್ಲವೆಂದು ದೂರಿದರು.

ಮೂರು ತಿಂಗಳ ಹಿಂದೆ ಅಧಿಕಾರಿಗಳ ಸಭೆ ನಡೆಸಿ ಫಲಾನುಭವಿಗಳಿಗೆ ಹಕ್ಕುಪತ್ರ ನೀಡಿರುವ ಬಗ್ಗೆ ಪರಿಶೀಲನೆ ನಡೆಸಿ ಅರಕಲಗೂಡು ತಹಶೀಲ್ದಾರ್ ಕಚೇರಿಯಲ್ಲಿರುವ ದಾಖಲೆಗಳನ್ನು ಪರಿಶೀಲಿಸಿ ನಿವೇಶನ ಹಕ್ಕುಪತ್ರ ನೀಡುವುದಾಗಿ ಭರವಸೆ ನೀಡಲಾಗಿತ್ತು. ಆದರೆ, ಬಳಿಕ ಎಸ್‌ಐಆರ್ ಸೇರಿ ವಿವಿಧ ಕಾರಣಗಳನ್ನು ಮುಂದಿಟ್ಟುಕೊಂಡು ಕಾಲಾವಕಾಶ ಕೇಳಲಾಗಿದ್ದು, ಈಗಾಗಲೇ ಮೂರು ತಿಂಗಳು ಕಳೆದರೂ ಸಮಸ್ಯೆ ಬಗೆಹರಿದಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇತ್ತೀಚೆಗೆ ಜಿಲ್ಲಾಧಿಕಾರಿ ಕಚೇರಿಗೆ ಭೇಟಿ ನೀಡಿದಾಗ ಸೋಮವಾರ ಬರುವಂತೆ ಸೂಚಿಸಿ ಅಪರ ಜಿಲ್ಲಾಧಿಕಾರಿ ಮೂಲಕ ಸಮಸ್ಯೆ ಪರಿಶೀಲಿಸಿ ಸೂಕ್ತ ನ್ಯಾಯ ಒದಗಿಸುವುದಾಗಿ ಅಧಿಕಾರಿಗಳು ಭರವಸೆ ನೀಡಿದ್ದರು.

ಹಾಸನದ ಬೀರನಹಳ್ಳಿ ಕೆರೆ ಬಳಿಯಿದ್ದ ಮನೆಗಳನ್ನು ತೆರವುಗೊಳಿಸಿ ಕೃಷ್ಣಾನಗರದಲ್ಲಿ ವಾಸಕ್ಕೆ ವ್ಯವಸ್ಥೆ ಮಾಡಲಾಗಿತ್ತು. ಬಳಿಕ ತೆರವುಗೊಳಿಸಿದ ಜಾಗವನ್ನು ಗುರುತಿಸಿ ಉದ್ಯಾನವನ ನಿರ್ಮಾಣ ಮಾಡಲಾಗಿದೆ. ಆದರೆ, ಅಲ್ಲಿದ್ದ ಬಡ ಕುಟುಂಬಗಳಿಗೆ ಪರ್ಯಾಯ ನಿವೇಶನ ಅಥವಾ ಹಕ್ಕುಪತ್ರ ನೀಡಿಲ್ಲ ಎಂದು ದೂರಿದರು.

ರೈತ ಸಂಘದ ದಾಸೇಗೌಡ, ಲಕ್ಷ್ಮಣ್, ಕಾಂತರಾಜು, ಸಾಕಮ್ಮ, ಸಮಿವುಲ್ಲಾ ಇತರರಿದ್ದರು.

# ವಿದ್ಯಾರ್ಥಿಗಳು ಆರ್ಥಿಕತೆಯ ಅರಿವು ಹೊಂದಬೇಕು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪದವಿ ಹಂತದಿಂದಲೇ ಅರ್ಥಶಾಸ್ತ್ರದ ವಿದ್ಯಾರ್ಥಿಗಳು ದೇಶದ ಹಾಗೂ ವಿಶ್ವದ ಆರ್ಥಿಕತೆಯ ಬಗ್ಗೆ ಜ್ಞಾನ ಹೊಂದಬೇಕು ಎಂದು ಸರ್ಕಾರಿ ಕಲಾ ವಾಣಿಜ್ಯ ಹಾಗೂ ಸ್ನಾತಕೋತ್ತರ ಕಾಲೇಜಿನ ಅರ್ಥಶಾಸ್ತ್ರ ಸಹಾಯಕ ಪ್ರಾಧ್ಯಾಪಕಿ ಡಿ.ದೀಪ ಹೇಳಿದರು.

ನಗರದ ಆರ್.ಸಿ. ರಸ್ತೆಯ ಗಂಧದಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅರ್ಥಶಾಸ್ತ್ರ ವಿಭಾಗದ ವತಿಯಿಂದ ಹಮ್ಮಿಕೊಂಡಿದ್ದ ಭಾರತದಲ್ಲಿ ಡಿಜಿಟಲ್ ಆರ್ಥಿಕತೆ ಮತ್ತು ಆರ್ಥಿಕ ಪರಿವರ್ತನೆ ಎಂಬ ವಿಷಯದ ಕುರಿತ ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅಭಿವೃದ್ಧಿ ಹೊಂದುತ್ತಿರುವ ರಾಷ್ಟ್ರಗಳ ಪೈಕಿ ಭಾರತ ಮುಂಚೂಣಿಯಲ್ಲಿದ್ದು, ದೇಶದ ಬೆಳವಣಿಗೆಗೆ ಆರ್ಥಿಕ ಪ್ರಗತಿ ಸಹಕಾರಿಯಾಗಿದೆ. ದೇಶದಲ್ಲಿ ಆರ್ಥಿಕತೆ ಬೆಳವಣಿಗೆಗೆ ಡಿಜಿಟಲ್ ತಂತ್ರಜ್ಞಾನ ಅವಳವಡಿಕೆ ಮಾಡಿಕೊಂಡ ನಂತರ ಹಲವು ಬದಲಾವಣೆಗಳು ಉಂಟಾಗಿದ್ದು, ದೇಶದ ಪ್ರಗತಿ ಮತ್ತಷ್ಟು ವೇಗವಾಗಿ ಬೆಳೆಯಲು ಸಹಕಾರಿಯಾಗಿದೆ. ಪದವಿ ಹಂತದಲ್ಲಿ ಅರ್ಥಶಾಸ್ತ್ರ ವಿಷಯ ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳು ಅರ್ಥಿಕತೆಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಹೆಚ್ಚು ತಿಳಿದುಕೊಳ್ಳಬೇಕು. ಪಠ್ಯದೊಂದಿಗೆ ದೇಶದ ಆರ್ಥಿಕ ಬೆಳವಣಿಗೆಗೆ ಸಂಬಂಧಿಸಿದಂತೆ ವಿಷಯಗಳನ್ನು ಸಂಗ್ರಹಿಸಿ ಅದರ ಬಗ್ಗೆ ತಿಳಿದುಕೊಳ್ಳಬೇಕು ಎಂದು ಹೇಳಿದರು.




ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಿ.ಕೆ. ಮಂಜಯ್ಯ ಮಾತನಾಡಿ, ಮಾನವರ ಜೀವನದಲ್ಲಿ ಅರ್ಥಶಾಸ್ತ್ರವು ಮುಖ್ಯ ಪಾತ್ರವನ್ನು ವಹಿಸಿದೆ, ಒಂದು ಉತ್ತಮ ಬದುಕು ಸಾಗಿಸಲು ಅರ್ಥಶಾಸ್ತ್ರವು ತುಂಬ ಮುಖ್ಯವಾಗಿರುತ್ತದೆ. ಅರ್ಥಶಾಸ್ತ್ರ ವಿಭಾಗದ ವಿದ್ಯಾರ್ಥಿಗಳು ಅರ್ಥಶಾಸ್ತ್ರದಲ್ಲಿ ಹೆಚ್ಚು ಸಾಧನೆ ಮಾಡಬೇಕು ಎಂದು ತಿಳಿಸಿದರು.

ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥೆ ಹೇಮಾವತಿ ಎಂ.ವಿ., ಐ.ಕ್ಯೂ.ಎ.ಸಿ. ಸಂಚಾಲಕ ಡಾ. ಕಾಂತೇಶ್, ಅಧ್ಯಾಪಕರಾದ ಜಿ.ಆರ್. ಮೋಹನ್ ಕುಮರ್, ಗ್ರಂಥಪಾಲಕ ಡಾ. ಮರಿರಾಜ್ ಸೇಡಂ ಹಾಗೂ ಇತರರು ಹಾಜರಿದ್ದರು.

# ಇಂದು ಮಹಿಳಾ ಸರ್ಕಾರಿ ನೌಕರರ ಸಂಘ ಉದ್ಘಾಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಹಿಳಾ ನೌಕರರ ಹಕ್ಕು, ಹಿತಾಸಕ್ತಿ ಹಾಗು ಸಮಸ್ಯೆಗಳಿಗೆ ಸ್ಪಂದಿಸುವ ಉದ್ದೇಶದಿಂದ ಅಸ್ತಿತ್ವ ಪಡೆದಿರುವ ರಾಜ್ಯ ಮಹಿಳಾ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕ ಉದ್ಘಾಟನೆ, ಪದಾಧಿಕಾರಿಗಳ ಪದಗ್ರಹಣ ಹಾಗು ಕಾನೂನು ಜಾಗೃತಿ-ಆರೋಗ್ಯ ಅರಿವು ಕಾರ್ಯಕ್ರಮವನ್ನು ಹಾಸನಾಂಬ ಕಲಾಕ್ಷೇತ್ರದಲ್ಲಿ ಸೆ. 2ರ ಬುಧವಾರ ಬೆಳಿಗ್ಗೆ 9.30ಕ್ಕೆ ಏರ್ಪಡಿಸಲಾಗಿದೆ ಎಂದು ಸಂಘದ ಜಿಲ್ಲಾಧ್ಯಕ್ಷೆ ಕೆ.ವೀಣಾ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸೇವಾ ನಿಯಮ ಕುರಿತ ಗೊಂದಲ, ಕಾನೂನು ಹಕ್ಕುಗಳು ಹಾಗು ಆರೋಗ್ಯದ ವಿಚಾರದಲ್ಲಿ ಅರಿವು ಹೊಂದುವುದು ಅಗತ್ಯವಾಗಿದೆ. ಅದಕ್ಕಾಗಿ ಸಂಘ ರಚಿಸಲಾಗಿದೆ. ರಾಜ್ಯ ಸಂಘದ ಅಡಿಯಲ್ಲಿ ಕರ್ತವ್ಯ ನಿರ್ವಹಿಸಲಿದೆ ಎಂದರು.

ಸಂಘದ ಮೂಲಕ ಮಹಿಳಾ ನೌಕರರಿಗೆ ಅಗತ್ಯ ಮಾರ್ಗದರ್ಶನ ಹಾಗು ನೆರವು ಒದಗಿಸುವ ಉದ್ದೇಶ ಹೊಂದಲಾಗಿದೆ. ಎಲ್ಲಾ ತಾಲ್ಲೂಕುಗಳಲ್ಲೂ ಸಂಘದ ಘಟಕ ರಚಿಸಲಾಗಿದ್ದು,

ಮಹಿಳಾ ನೌಕರರ ಸಮಸ್ಯೆಗಳಿಗೆ ಸ್ಪಂದಿಸಲಾಗುವುದು ಎಂದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಕಾರ್ಯಕ್ರಮ ಉದ್ಘಾಟಿಸುವರು. ರಾಜ್ಯಾಧ್ಯಕ್ಷೆ ಡಾ.ಶೈಲಜಾ ಸಿ.ವಿ. ಪ್ರಾಸ್ತಾವಿಕ ನುಡಿ ಆಡಲಿದ್ದಾರೆ. ಜಿಲ್ಲಾಧ್ಯಕ್ಷೆ ಕೆ.ವೀಣಾ ಅಧ್ಯಕ್ಷತೆ ವಹಿಸಲಿದ್ದಾರೆ.




ಸಂಸದ ಶ್ರೇಯಸ್ ಪಟೇಲ್, ಶಾಸಕ ಹೆಚ್.ಪಿ.ಸ್ವರೂಪ್ ಸೇರಿ ಜಿಲ್ಲೆಯ ಎಲ್ಲಾ ಶಾಸಕರು ಭಾಗಿಯಾಗುವರು. ಕಾನೂನು ಜಾಗೃತಿ ಕುರಿತು ವಕೀಲೆ ಗಿರಿಜಾಂಬಿಕೆ, ಆರೋಗ್ಯ ಸಮಸ್ಯೆ ಕುರಿತು ಹಿಮ್ಸ್‌ನ ಡಾ. ಅನುಪಮಾ ಉಪನ್ಯಾಸ ನೀಡಲಿದ್ದಾರೆ ಎಂದರು.

ಸಂಘದ ಖಜಾಂಚಿ ಪುಷ್ಪ, ಉಪಾಧ್ಯಕ್ಷೆ ಬಿ.ಎಂ.ಶೃತಿ, ಕ್ರೀಡಾ ಕಾರ್ಯದರ್ಶಿ ಯಶೋಧ ಇದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248